# ಪ್ರಥಮ ದರ್ಜೆ ನ್ಯಾಯಿಕ ದಂಡಾಧಿಕಾರಿಗಳ ನ್ಯಾಯಾಲಯ ಅಫಜಲಪೂರ

## ಸಿಸಿ ನಂ. **251/2020**

ಚಾಸಾ-2 ಪ್ರಾಸಾ-1

ಸತ್ಯ ಪ್ರತಿಜ್ಞೆಯ ಮೇರೆಗೆ ಪ್ರಮಾಣಿಕೃತ ಹೇಳಿಕೆ
ಪಡೆದುಕೊಳ್ಳಲಾಯಿತು.
ದಿನಾಂಕ: 07-11-2025

| | | |
|---|---|---|
| ಹೆಸರು | : | ಅಬ್ದುಲ ರಜಾಕ |
| ತಂದೆಯ ಹೆಸರು | : | ಬಾಷಾಸಾಬ |
| ವಯಸ್ಸು | : | 45 ವರ್ಷ |
| ಉದ್ಯೋಗ | : | ಚಾಲಕ |
| ವಾಸಸ್ಥಳ | : | ಹಡಗಲಿ |

-: ಮುಖ್ಯ ವಿಚಾರಣೆ :- ಮಾನ್ಯ ಸಹಾಯಕ ಸರ್ಕಾರಿ ಅಭಿಯೋಜಕರವರಿಂದ :-

ಚಾಸಾ 3 ಪರಿಚಯ ಇರುತ್ತದೆ.

ಸಾಕ್ಷಿಗೆ ಜಪ್ತಿ ಪಂಚನಾಮೆಯನ್ನು ತೋರಿಸಿದ್ದು ಸಾಕ್ಷಿ ಅದರಲ್ಲಿ ತನ್ನ ಸಹಿ ನೋಡಿ ಗುರುತಿಸಿದ್ದು ಜಪ್ತಿ ಪಂಚನಾಮೆಯನ್ನು ನಿಪಿ-**1** ಎಂದು ಮತ್ತು ಸಾಕ್ಷಿಯ ಸಹಿಯನ್ನು ನಿಪಿ-**1**(ಎ) ಎಂದು ಗುರುತಿಸಲಾಯಿತು.

ನಾನು ಒಂದು ದಿನ ಕಾರ್ಖಾನೆಯಲ್ಲಿದ್ದಾಗ ಪೋಲಿಸರು ನನಗೆ ಕರೆದು ಸಹಿ ಮಾಡು ಎಂದು ಹೇಳಿದ್ದಕ್ಕೆ ಸಹಿ ಮಾಡಿರುತ್ತೇನೆ. ನನಗೆ ಈ ಪ್ರಕರಣದ ಕುರಿತು ಯಾವುದೇ ಮಾಹಿತಿ ಇಲ್ಲ.

(ಈ ಹಂತದಲ್ಲಿ ಸ.ಸ.ಅ ರವರು ಸಾಕ್ಷಿಯನ್ನು ಪ್ರತಿಕೂಲ ಸಾಕ್ಷಿ ಎಂದು ಪರಿಗಣಿಸಿ ಪಾಟೀಸವಾಲಿಗೆ ಅನುಮತಿ ಕೋರಿರುತ್ತಾರೆ, ಅನುಮತಿ ನೀಡಲಾಯಿತು)

<u>ಪಾಟೀ ಸವಾಲುಃ ಸ.ಸ.ಅ. ರವರಿಂದ</u>

ದಿಃ 05-10-2019 ರಂದು ಚಾಸಾ 1 ರವರು ಹವಳಗಾ ಫ್ಯಾಕ್ಟರಿಗೆ ನಮಗೆ ಕರೆಸಿರುತ್ತಾರೆ ಎಂದರೆ ಸರಿಯಲ್ಲ. ಚಾಸಾ 1 ರವರು ನನಗೆ ಮತ್ತು ಚಾಸಾ 3 ರವರಿಗೆ ತಮಗೆ ಬಂದ ಮರಳು ಅಕ್ರಮ ಸಾಗಾಣಿಕೆ ಭಾತ್ಮಿ ಕುರಿತು ತಿಳಿಸಿ ಪಂಚರಾಗಲು ಕೇಳಿರುತ್ತಾರೆ ಎಂದರೆ ಸರಿಯಲ್ಲ. ತದನಂತರ ಹವಳಗಾ ಗ್ರಾಮದ ರೇವಣಸಿದ್ದೇಶ್ವರ ದೇವಸ್ಥಾನದ ಹತ್ತಿರ ನಾನು ಚಾಸಾ 1, 3 ರವರು ಮತ್ತು ಪೋಲಿಸರು ಅಕ್ರಮವಾಗಿ ಮರಳು ಸಾಗಾಟ ಮಾಡುತ್ತಿದ್ದ ಲಾರಿ ಮೇಲೆ ದಾಳಿಮಾಡಿ ಮರಳು ಮತ್ತು ಲಾರಿಯನ್ನು ಜಪ್ತಿಪಡಿಸಿಕೊಂಡು ಜಪ್ತಿ ಪಂಚನಾಮೆಗೆ ನಮ್ಮ ಸಹಿ ಪಡೆದಿರುತ್ತಾರೆ ಎಂದರೆ ಸರಿಯಲ್ಲ.

<u>ಪಾಟೀ ಸವಾಲುಃ ಆರೋಪಿ ಪರ ಶ್ರೀ **PBP** ವಕೀಲರಿಂದಃ-</u>

ಆರೋಪಿ ಪರ ವಕೀಲರು ಪಾಟೀ ಸವಾಲು ಇಲ್ಲಾ ಎಂದು ನುಡಿದಿರುತ್ತಾರೆ.

<u>ಮರು ವಿಚಾರಣೆಃ - ಇಲ್ಲ.</u>

(ತೆರೆದ ನ್ಯಾಯಾಲಯದಲ್ಲಿ ನನ್ನ ಉಕ್ತ ಲೇಖನದಂತೆ ಬೆರಳಚ್ಚು ಮಾಡಲಾಯಿತು)

ಓ ಹೇ ಕೇ ಸರಿ ಇದೆ

ಸಿವಿಲ್ & ಪ್ರ.ದ.ನ್ಯಾ. ದಂಡಾಧಿಕಾರಿಗಳು
ಅಫಜಲಪೂರ